**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ತರೀಕೆರೆ.</u>**

**<u>ಕ್ರಿ ಮೊ ಸಂಖ್ಯೆ 38/2020</u>**

**<u>ಪಿರ್ಯಾದಿಃ</u>** **ಶ್ರೀ ಅಶೋಕ್ ಟಿ.ಎಸ್**

**-ವಿರುದ್ದ-**

**<u>ಆರೋಪಿ/ತರುಃ</u>** **ಶ್ರೀ ಸಮಿಅಹ್ಮದ್**

**<u>ದಂಡ ಪ್ರಕ್ರಿಯಾ ಸಂಹಿತೆ ಕಲಂ 313 ರಡಿಯಲ್ಲಿ ಆರೋಪಿಯ ಹೇಳಿಕೆ</u>**

ಪ್ರಶ್ನೆ-1: ನೀವು ಸಾಕ್ಷಿದಾರರ ಸಾಕ್ಷ್ಯದ ಹೇಳಿಕೆಯನ್ನು ಕೇಳಿಸಿಕೊಂಡಿದ್ದೀರಾ?

ಉತ್ತರ: Yes

ಪ್ರಶ್ನೆ-2: ಪಿಡಬ್ಲೂ-1. ಶ್ರೀ ಅಶೋಕ್.ಟಿ.ಎಸ್ ಇವರು ತಮ್ಮ ಸಾಕ್ಷ್ಯದಲ್ಲಿ ಆರೋಪಿಯಾದ ನೀವು ಪಿರ್ಯಾದುದಾರರಿಗೆ ಅನೇಕ ವರ್ಷಗಳಿಂದ ಪರಿಚಯವಿದ್ದು, ಆರೋಪಿಯಾದ ನೀವು 2018 ನೇ ಮಾರ್ಚ್ ಮೊದಲನೇ ವಾರದಲ್ಲಿ ರೂ.2,50,000/- ಗಳನ್ನು ಸಾಲವಾಗಿ ಕೇಳಿ ಸದರಿ ಮೊತ್ತವನ್ನು ಆರು ತಿಂಗಳ ಒಳಗಾಗಿ ತಿಂಗಳೊಂದಕ್ಕೆ ಶೇಕಡ 2 ರಂತೆ ಬಡ್ಡಿಯನ್ನು ಸೇರಿಸಿ ಹಿಂತಿರುಗಿಸುವುದಾಗಿ ಒಪ್ಪಿ, ಅದೇ ದಿನ ಸಾಕ್ಷಿದಾರರ ಸಮಕ್ಷಮ ರೂ.2,50,000/- ಗಳನ್ನು ಪಡೆದು ಆನ್ ಡಿಮ್ಯಾಂಡ್ ಪ್ರಾಮಿಸರಿ ಪತ್ರವನ್ನು ಬರೆದುಕೊಟ್ಟಿರುತ್ತೀರಿ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ False

ಪ್ರಶ್ನೆ-3:ಪಿಡಬ್ಲೂ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ಪಡೆದ ಹಣಕ್ಕೆ ಸರಿಯಾಗಿ ಬಡ್ಡಿಯನ್ನು ಪಾವತಿ ಮಾಡದೆ ಬಹಳಷ್ಟು ಬಡ್ಡಿಯು ಬಾಕಿ ಉಳಿದಿದ್ದು, ಪಿರ್ಯಾದುದಾರರು ಆರೋಪಿಯಾದ ನಿಮಗೆ ಅಕ್ಟೋಬರ್ ತಿಂಗಳ ಮೊದಲನೇ ವಾರದಲ್ಲಿ ಒತ್ತಡವನ್ನು ಹಾಕಿದಾಗ ಆರೋಪಿಯಾದ ನೀವು ಅಸಲು ಮತ್ತು ಬಡ್ಡಿಯನ್ನು ಕೊಡಲು ಒಪ್ಪಿ, ಆರೋಪಿಯದ ನೀವು ಪ್ರಾಮಿಸರಿ ನೋಟನ್ನು ಹಿಂದಕ್ಕೆ ಪಡೆದು ದಿನಾಂಕ 20.11.2019 ರ ದಿನಾಂಕವನ್ನು ನಮೂದಿಸಿ ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ತರೀಕೆರೆ ಶಾಖೆಗೆ ಸೇರಿದ ಚೆಕ್ ಸಂಖ್ಯೆ 259754 ನ್ನು ರೂ.3,50,000/- ಗಳಿಗೆ ನೀಡಿದ್ದು, ಸದರಿ ಚೆಕ್ಕನ್ನು ಪಿರ್ಯಾದಿಯು ಕೆನರಾ ಬ್ಯಾಂಕ್, ತರೀಕೆರೆ ಶಾಖೆಯಲ್ಲಿ ನಗದೀಕರಣಕ್ಕಾಗಿ ಹಾಜರುಪಡಿಸಿದಾಗ ಸದರಿ ಬ್ಯಾಂಕಿನವರು ಸದರಿ ಚೆಕ್ಕು ಆರೋಪಿಯಾದ ನಿಮ್ಮ ಖಾತೆಯಲ್ಲಿ **'ಸಾಕಷ್ಟು ಹಣವಿಲ್ಲ'** ಎಂಬ ಕಾರಣಕ್ಕಾಗಿ ಅಮಾನ್ಯಗೊಂಡಿದೆ ಎಂದು ಹಿಂಬರಹ ನೀಡಿರುತ್ತಾರೆ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ False

ಪ್ರಶ್ನೆ-3:ಪಿಡಬ್ಲೂ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಅನಂತರ ಪಿರ್ಯಾದಿಯು ದಿನಾಂಕ 28.11.2019 ರಂದು ವಕೀಲರ ಮೂಲಕ ನೋಟೀಸ್ ನೀಡಿದ್ದು, ಅದು ಆರೋಪಿಯಾದ ನಿಮಗೆ ದಿನಾಂಕ 30.11.2019 ರಂದು ತುಲುಪಿದಾಗ ಆರೋಪಿಯಾದ ನೀವು ಅದನ್ನು ಸ್ವೀಕರಿಸದೆ ಅನ್ ಕ್ಲೈಮಡ್ ಎಂಬ ಷರಾದೊಂದಿಗೆ ವಾಪಸ್ಸು ಬಂದಿದ್ದು, ಯಾವುದೇ ಮರು ಉತ್ತರವನ್ನು ಮತ್ತು ಯಾವುದೇ ಹಣವನ್ನು ಮರುಪಾವತಿ ಮಾಡಿರುವುದಿಲ್ಲ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ?

ಉತ್ತರಃ False

ಪ್ರಶ್ನೆ-4: ಪಿಡಬ್ಲೂ-1 ರವರು ಮುಂದುವರೆದು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ಮೋಸ ಮಾಡುವ ಉದ್ದೇಶದಿಂದ ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲ ಎಂಬ ವಿಚಾರ ತಿಳಿದಿದ್ದರೂ ಸದರಿ ಚೆಕ್ ನ್ನು ತನಗೆ ನೀಡಿರುತ್ತೀರಿ, ನಂತರ

ತಾನು ಆರೋಪಿಯಾದ ನಿಮಗೆ ನೋಟೀಸು ನೀಡಿದರೂ ಸಹ ಆರೋಪಿಯಾದ ನೀವು ಸದರಿ ಸಾಲದ ಹಣವನ್ನು ಹಿಂತಿರುಗಿಸಿರುವುದಿಲ್ಲ ಎಂದು ನುಡಿದಿರುತ್ತಾರೆ. ಇದಕ್ಕೆ ನೀವು ಏನು ಹೇಳುತ್ತೀರಿ ?

ಉತ್ತರ: False

ಪ್ರಶ್ನೆ-5: ನೀವು ಏನಾದರೂ ಹೇಳುವುದಿದೆಯಾ ?

ಉತ್ತರ: Not at this moment

ಪ್ರಶ್ನೆ-6: ಈ ಪ್ರಕರಣದಲ್ಲಿ ನಿಮ್ಮ ಪರ ಸಾಕ್ಷಿ/ಪ್ರತಿರಕ್ಷಣೆ ಏನಾದರೂ ಇದೆಯೇ ?

ಉತ್ತರ: Yes

(ಈ ಹೇಳಿಕೆಯನ್ನು ಆರೋಪಿಗೆ ತೆರೆದ ನ್ಯಾಯಾಲಯದಲ್ಲಿ ಕನ್ನಡ ಭಾಷೆಯಲ್ಲಿ ಓದಿ ಹೇಳಿದ್ದು, ಆರೋಪಿಯ ಉತ್ತರನ್ನು ಯಥಾವತ್ತಾಗಿ ದಾಖಲಿಸಿದ್ದೇನೆ.)

ದಿನಾಂಕ: 07.02.2026

**ಸಹಿ/-**

**(ರಾಹುಲ್ ಶೆಟ್ಟಿಗಾರ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ.ದಂ., ತರೀಕೆರೆ.**